**ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 50/2021**

**ಚಾ.ಸಾ. :-1**
**ಪ್ರಾ.ಸಾ. :-2**

ಹೆಸರು : ಶಂಕರ್

ತಂದೆಯ ಹೆಸರು : ನಾಗರಾಜು

ವಯಸ್ಸು : 42 ವರ್ಷ

ಉದ್ಯೋಗ : ವ್ಯವಸಾಯ

ವಾಸಸ್ಥಳ : ಗಣಂಗೂರು

---

**ಪ್ರಮಾಣೀಕರಿಸಲಾದ ದಿನಾಂಕಃ- 03.11.2025**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ಮೃತ ನಾಗೇಶ್ ರವರು ನನ್ನ ಅಣ್ಣ. ಅವರಿಗೆ ಸುಮಾರು 5 ವರ್ಷಗಳ ಹಿಂದೆ ರಾತ್ರಿ 9.30 ರ ಸಮಯದಲ್ಲಿ ಶ್ರೀರಂಗಪಟ್ಟಣದ ಗಣಂಗೂರು ಗ್ರಾಮದ ಬಳಿ ಅಪಘಾತವಾಗಿರುತ್ತದೆ. ಆ ಸಮಯದಲ್ಲಿ ಅವರು ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದು, ಅವರಿಗೆ ಇನ್ನೊಂದು ಗೂಡ್ಸ್ ವಾಹನ ಡಿಕ್ಕಿಪಡಿಸಿ ಅಪಘಾತವಾಗಿರುತ್ತದೆ.

ನನಗೆ ಅಪಘಾತದ ಬಗ್ಗೆ ನಮ್ಮ ಊರಿನವರು ನನಗೆ ಮನೆಯ ಬಳಿ ತಿಳಿಸಿರುತ್ತಾರೆ. ನಂತರ ನಾನು ಆಸ್ಪತ್ರೆಗೆ ಹೋಗಿ ಅವರನ್ನು ನೋಡಿರುತ್ತೇನೆ. ಅವರಿಗೆ ತಲೆಯ ಭಾಗಕ್ಕೆ ಗಾಯವಾಗಿದ್ದು, ಮೃತಪಟ್ಟಿದ್ದರು.

ಆ ಬಗ್ಗೆ ನಾನು ಪೊಲೀಸರಿಗೆ ದೂರು ನೀಡಿರುತ್ತೇನೆ. ಸಾಕ್ಷಿಯ ಸಹಿ ಇರುವ ಒಂದು ದಾಖಲೆಯು ದೂರಾಗಿದ್ದು ಅದನ್ನು ಈಗ ನಿಪಿ-2 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರ್ತಿಸಲಾಯಿತು.

ಸಾಕ್ಷಿಯ ಸಹಿ ಇರುವ ಇನ್ನೊಂದು ದಾಖಲೆಯು ಸ್ಥಳ ಮಹಜರ್ ಆಗಿದ್ದು, ಅದನ್ನು ಈಗ ನಿಪಿ-4 ಎಂದು ಮತ್ತು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರ್ತಿಸಲಾಯಿತು. ನಿಪಿ-4ಕ್ಕೆ ಎಲ್ಲಿ ಸಹಿ ಮಾಡಿರುತ್ತೇನೆಂದು ನೆನಪಿಲ್ಲ. ಅದರಲ್ಲಿ ಏನು ಬರೆದಿರುತ್ತದೆ ಎಂದು ನನಗೆ ಗೊತ್ತಿಲ್ಲ. ನನ್ನ ಮುಂದೆ ಯಾವುದೇ ವಾಹನವನ್ನು ವಶಪಡಿಸಿಕೊಂಡಿಲ್ಲ.

*(ಈ ಹಂತದಲ್ಲಿ ಸ.ಸ.ಅ.ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸುವಂತೆ ಕೋರಿಕೊಂಡ ಮೇರೆಗೆ ದಾಖಲೆಗಳನ್ನು ಪರಿಶೀಲಿಸಿ, ಸ.ಸ.ಅ. ವಾದವನ್ನು ಆಲಿಸಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅವಕಾಶ ನೀಡಲಾಯಿತು.)*

**ಪಾಟೀ ಸವಾಲು : ಮಾನ್ಯ ಸ.ಸ.ಅ.ರವರಿಂದ :**

ನಿಪಿ-2 ನ್ನು ನಾನು ಬರೆದಿರುವುದಿಲ್ಲ, ಪೊಲೀಸರು ಬರೆದು ನನ್ನ ಸಹಿ ಪಡೆದಿರುತ್ತಾರೆ. ನಂತರ ಪೊಲೀಸರು ಕೃತ್ಯ ಸ್ಥಳಕ್ಕೆ ಬಂದು ನಿಪಿ-4 ರಂತೆ ಸ್ಥಳ ಮಹಜರ್ ಮಾಡಿ ದ್ವಿಚಕ್ರ ವಾಹನ ಅಮಾನತ್ತುಪಡಿಸಿಕೊಂಡು ನನ್ನ ಸಹಿ ಪಡೆದಿರುತ್ತಾರೆಂದರೆ ಸರಿ. ಹಸಿರು ಬಣ್ಣದ ಕ್ಯಾಂಟರ್ ನನ್ನ ಅಣ್ಣನಿಗೆ ಡಿಕ್ಕಿಪಡಿಸಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಆರೋಪಿಗೆ ಸಹಾಯ ಮಾಡಲೆಂದು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ : ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**